# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಧಾರ್ಮಿಕ ಅಲ್ಪಸಂಖ್ಯಾತ ವಿಷಯದ ಬಗ್ಗೆ ಕಲಬುರಗಿ ವಿಶ್ವವಿದ್ಯಾನಿಲಯದಲ್ಲಿ ಪೀಠ ಸ್ಥಾಪಿಸುವ ಕುರಿತು.

**ಓದಲಾಗಿದೆ:** 1 2016-17ನೇ ಸಾಲಿನ ಆಯವ್ಯಯ ಭಾಷಣ.

2 ನಿರ್ದೇಶಕರು, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ಇವರು ಸಲ್ಲಿಸಿರುವ ಏಕಕಡತ ಪ್ರಸ್ತಾವನೆ ಸಂಖ್ಯೆ:ಅಸಂನಿ/ಕಲಬುರಗಿ ವಿ.ವಿ/ಸಿಆರ್-89/2016-17, ದಿನಾಂಕ:26-08-2016.

*****

**ಪ್ರಸ್ತಾವನೆ:**

ಮೇಲೆ ಓದಲಾದ ಕ್ರಮ ಸಂಖ್ಯೆ(1)ರಲ್ಲಿ 2016-17ನೇ ಸಾಲಿನಲ್ಲಿ ಸನ್ಮಾನ್ಯ ಮುಖ್ಯಮಂತ್ರಿಯವರು ಆಯವ್ಯಯ ಭಾಷಣ ಕಂಡಿಕೆ-210ರಲ್ಲಿ ಧಾರ್ಮಿಕ ಅಲ್ಪಸಂಖ್ಯಾತರ ವಿಷಯದ ಬಗ್ಗೆ ಕಲಬುರಗಿ ವಿಶ್ವವಿದ್ಯಾನಿಲಯದಲ್ಲಿ ಪೀಠ ಸ್ಥಾಪಿಸಲಾಗುವುದೆಂದು ಘೋಷಿಸಿರುತ್ತಾರೆ.

ನಿರ್ದೇಶಕರು, ಅಲ್ಪಸಂಖ್ಯಾತರ ಕಲ್ಯಾಣ ನಿರ್ದೇಶನಾಲಯರವರು ಸಲ್ಲಿಸಿರುವ ಪ್ರಸ್ತಾವನೆಯಲ್ಲಿ ರಿಜಿಸ್ಟ್ರಾರ್, ಕಲಬುರಗಿ ವಿಶ್ವವಿದ್ಯಾಲಯರವರು ನಿರ್ದೇಶನಾಲಯಕ್ಕೆ ಸಲ್ಲಿಸಿರುವ ಪ್ರಸ್ತಾವನೆಯಲ್ಲಿ ಅಲ್ಪಸಂಖ್ಯಾತರ ಸಮುದಾಯಗಳಾದ ಮುಸ್ಲಿಂ, ಕ್ರೈಸ್ತ, ಜೈನ್, ಬೌದ್ಧ, ಸಿಖ್ ಮತ್ತು ಪಾರ್ಸಿ ಸಮುದಯಗಳ ಅಭ್ಯರ್ಥಿಗಳು ಅಲ್ಪಸಂಖ್ಯಾತರ ಕುರಿತಾದ ವಿಷಯಗಳ ಬಗ್ಗೆ ಅಧ್ಯಯನ, ಸಂಶೋಧನೆ ಹಾಗೂ ಇತರೆ ಚಟುವಟಿಕೆಗಳಲ್ಲಿ ತೊಡಗಿಸಿಕೊಳ್ಳಲು ತಮ್ಮ ಸಂಸ್ಥೆಯಲ್ಲಿ ಸ್ಥಳಾವಕಾಶ ಮೂಲಭೂತ ಸೌಕರ್ಯಗಳ ವ್ಯವಸ್ಥೆ ಸಂಪನ್ಮೂಲ ವ್ಯಕ್ತಿಗಳು ಹಾಗೂ ಇತರೆ ಅಧಯ್ಯನಕ್ಕೆ ಅವಶ್ಯವಿರುವ ಸೌಲಭ್ಯಗಳನ್ನು ಒದಗಿಸಿಕೊಡಲು ಸಿದ್ಧವಿರುವುದಾಗಿ ಮತ್ತು ರಾಜ್ಯದಲ್ಲಿನ ಅಲ್ಪಸಂಖ್ಯಾತರ ಸಾಮಾಜಿಕ, ಆರ್ಥಿಕ, ಶೈಕ್ಷಣಿಕ, ಸ್ಥಿತಿಗತಿಗಳು ಪೀಠ ಸ್ಥಾಪಿಸಲು ರೂಪುರೇಷೆಗಳು, ಪ್ರಮುಖ ಚಟುವಟಿಕೆಗಳು, ಸಂಶೋಧನಾ ವ್ಯಾಪ್ತಿ, ವಿವಿಧ ತರಬೇತಿಗಳು, ಸಂಶೋಧನಾ ಅಭ್ಯರ್ಥಿಗಳಿಗೆ ಹಾಗೂ ಸಮಾಜ ಸಮುದಾಯಕ್ಕೆ ಹಾಗೂ ಇಲಾಖೆಗಳಿಗೆ ಸಂಶೋಧನೆಯ ಪ್ರಯೋಜನ ಕುರಿತಂತೆ ಪ್ರಸ್ತಾವನೆಯಲ್ಲಿ ತಿಳಿಸಿರುತ್ತಾರೆ.

ಮಾನ್ಯ ಮುಖ್ಯಮಂತ್ರಿಗಳು 2016-17ನೇ ಸಾಲಿನ ಆಯವ್ಯಯ ಭಾಷಣದಲ್ಲಿ ಸನ್ಮಾನ್ಯ ಮುಖ್ಯಮಂತ್ರಿಯವರು ಆಯವ್ಯಯ ಭಾಷಣ ಕಂಡಿಕೆ-210ರಲ್ಲಿ ಧಾರ್ಮಿಕ ಅಲ್ಪಸಂಖ್ಯಾತರ ವಿಷಯದ ಬಗ್ಗೆ ಕಲಬುರಗಿ ವಿಶ್ವವಿದ್ಯಾನಿಲಯದಲ್ಲಿ ಪೀಠ ಸ್ಥಾಪಿಸಲಾಗುವುದೆಂದು ಘೋಷಿಸಿರುವುದರಿಂದ, ನಿರ್ದೇಶಕರು, ಅಲ್ಪಸಂಖ್ಯಾತರ ನಿರ್ದೇಶನಾಲಯ ರವರು ಮೇಲೆ ಓದಲಾದ ಕ್ರಮ ಸಂಖ್ಯೆ(2)ರಲ್ಲಿ ಏಕಕಡತ ಪದ್ಧತಿಯಲ್ಲಿ ಪ್ರಸ್ತಾವನೆ ಸಲ್ಲಿಸಿರುತ್ತಾರೆ.

ಸದರಿ ಪ್ರಸ್ತಾವನೆಯನ್ನು ಪರಿಶೀಲಿಸಿ ಸರ್ಕಾರವು ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರಿ ಆದೇಶ ಸಂಖ್ಯೆ:MWD 357 MDS 2016, ಬೆಂಗಳೂರು, ದಿನಾಂಕ:05-11-2016.**

ಮೇಲೆ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ಧಾರ್ಮಿಕ ಅಲ್ಪಸಂಖ್ಯಾತರ ವಿಷಯದ ಬಗ್ಗೆ ಕಲಬುರಗಿ ವಿಶ್ವವಿದ್ಯಾನಿಲಯದ ಅಡಿಯಲ್ಲಿ ಮತೀಯ ಅಲ್ಪಸಂಖ್ಯಾತ ಸಮುದಾಯಗಳಾದ ಮುಸ್ಲಿಂ, ಕ್ರೈಸ್ತ, ಜೈನ್, ಬೌದ್ಧ, ಸಿಖ್ ಮತ್ತು ಪಾರ್ಸಿ ಸಮುದಾಯಗಳ ಅಭ್ಯರ್ಥಿಗಳು ಅಧ್ಯಯನ, ಸಂಶೋಧನೆ ಹಾಗೂ ಇತರೆ ಚಟುವಟಿಕೆಗಳಲ್ಲಿ ತೊಡಗಿಸಿಕೊಳ್ಳಲು ಧಾರ್ಮಿಕಅಲ್ಪಸಂಖ್ಯಾತ ವಿಷಯದ ಬಗ್ಗೆ ಕಲಬುರಗಿ ವಿಶ್ವವಿದ್ಯಾಲಯದಲ್ಲಿ

ಪೀಠವನ್ನು ಕೆಳಕಂಡ ಷರತ್ತಿಗೊಳಪಟ್ಟು ತಕ್ಷಣದಿಂದ ಜಾರಿಗೆ ಬರುವಂತೆ ಪ್ರಾರಂಭಿಸಲು ಸರ್ಕಾರದ ಮಂಜೂರಾತಿ ನೀಡಿ ಆದೇಶಿಸಿದೆ.

<u>ಷರತ್ತುಗಳು</u>

1) ಮೇಲ್ಕಂಡ ಸಂಸ್ಥೆಯೊಂದಿಗೆ ಕಾರ್ಯಕ್ರಮಗಳ ರೂಪುರೇಷೆ, ಅನುಷ್ಠಾನ, ಕ್ರಿಯಾ ಯೋಜನೆ ಅನುದಾನ ಹಾಗೂ ಇತರೆ ವಿಷಯಗಳ ಬಗ್ಗೆ ಸಂಸ್ಥೆಯ ದಿನಾಂಕ:03.08.2016ರ ಪ್ರಸ್ತಾವನೆಯಲ್ಲಿ ಒಳಗೊಂಡಿರುವ ಕಾರ್ಯ ಕ್ರಮಗಳ ಬಗ್ಗೆ ಒಡಂಬಡಿಕೆಯನ್ನು (ಎಂ.ಓ.ಯು) ನಿರ್ದೇಶಕರು, ಅಲ್ಪಸಂಖ್ಯಾತರ ನಿರ್ದೇಶನಾಲಯ ಇವರು ಮಾಡಿಕೊಳ್ಳತಕ್ಕದ್ದು.
2) ಸದರಿ ಅನುದಾನವನ್ನು ಉದ್ದೇಶಿತ ಕಾರ್ಯಕ್ರಮಗಳಿಗೆ ಮಾತ್ರ ಬಳಸತಕ್ಕದ್ದು.
3) ನಿರ್ದೇಶಕರು, ಅಲ್ಪಸಂಖ್ಯಾತರ ನಿರ್ದೇಶನಾಲಯ ಇವರು ಸಂಸ್ಥೆಗೆ ಬಿಡುಗಡೆ ಮಾಡಬೇಕಾದ ಅನುದಾನವನ್ನು ಉಪಯೋಗಿತ ಪ್ರಮಾಣ ಪತ್ರವನ್ನು ಪಡೆದು ಕಾಲಕಾಲಕ್ಕೆ ಅನುದಾನವನ್ನು ಬಿಡುಗಡೆ ಮಾಡತಕ್ಕದ್ದು.
4) ಒಡಂಬಡಿಕೆಯಲ್ಲಿ ನಿಗದಿಪಡಿಸುವ ಕಾರ್ಯಕ್ರಮಗಳನ್ನು ಈ ಸಂಸ್ಥೆಯು ನಿರ್ವಹಿಸಿ ಕಾಲಕಾಲಕ್ಕೆ ವರದಿಗಳನ್ನು ಸಲ್ಲಿಸತಕ್ಕದ್ದು. ನಿರ್ದೇಶಕರು, ಇಂತಹ ವರದಿಯನ್ನು ಸರ್ಕಾರದ ಅವಗಾಹನೆಗೆ ಸಲ್ಲಿಸತಕ್ಕದ್ದು.
5) ಸರ್ಕಾರ, ನಿರ್ದೇಶನಾಲಯದಿಂದ ಆಗಾಗ್ಗೆ ಕೋರಲಾಗುವ ಮಾಹಿತಿಯನ್ನು ಅಧ್ಯಯನ ಪೀಠವು ಒದಗಿಸತಕ್ಕದ್ದು.

ಇದಕ್ಕೆ ತಗಲುವ ವೆಚ್ಚವನ್ನು 2016-17ನೇ ಸಾಲಿನ ಲೆಕ್ಕಶೀರ್ಷಿಕೆ:- 2225-03-001-0-03ರಡಿ ನಿರ್ದೇಶನಾಲಯದ ನಿರ್ದೇಶನ ಮತ್ತು ಆಡಳಿತ ಯೋಜನೆಯಡಿ ಪ್ರಸಕ್ತ ಸಾಲಿನಲ್ಲಿ ಮಂಜೂರಾಗಿರುವ ಅನುದಾನದ ಮಿತಿಯಲ್ಲಿಯೇ ಭರಿಸತಕ್ಕದ್ದು.

ಈ ಆದೇಶವನ್ನು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ:ಆಇ 625 ವೆಚ್ಚ-3/2016 ದಿನಾಂಕ:06-10-2016 ರಲ್ಲಿ ಹಾಗೂ ಯೋಜನಾ ಇಲಾಖೆಯ ಟಿಪ್ಪಣಿ ಸಂಖ್ಯೆ: ಪಿಡಿ 110 ಐಎಂಎಂ 2016 ದಿ:18-10-2016ರಲ್ಲಿ ನೀಡಿರುವ ಸಹಮತಿಯೊಂದಿಗೆ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಎಂ.ನಾಗರತ್ನ)
ಸರ್ಕಾರದ ಜಂಟಿ ಕಾರ್ಯದರ್ಶಿ,
ಅಲ್ಪಸಂಖ್ಯಾತರ ಕಲ್ಯಾಣ, ಹಜ್
ಮತ್ತು ವಕ್ಫ್ ಇಲಾಖೆ.

ಗೆ:

1. ಮಹಾಲೇಖಪಾಲರು, (ಅ ಮತ್ತು ಖ) ಕರ್ನಾಟಕ, ಬೆಂಗಳೂರು,
2. ಸರ್ಕಾರದ ಕಾರ್ಯದರ್ಶಿಗಳು, ಅಲ್ಪಸಂಖ್ಯಾತರ ಕಲ್ಯಾಣ ಹಜ್ ಮತ್ತು ವಕ್ಫ್ ಇಲಾಖೆ, ಬೆಂಗಳೂರು.
3. ಸರ್ಕಾರದ ಕಾರ್ಯದರ್ಶಿ, ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು.
4. ನಿರ್ದೇಶಕರು, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ, ವಿ.ವಿ.ಗೋಪುರ, 2೦ನೇ ಮಹಡಿ, ಬೆಂಗಳೂರು,
5. ನಿರ್ದೇಶಕರು, ಯೋಜನಾ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.
6. ಆಂತರಿಕ ಆರ್ಥಿಕ ಸಲಹೆಗಾರರು, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ, ಬೆಂಗಳೂರು.
7. ಉಪ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ ವೆಚ್ಚ-3, ಬೆಂಗಳೂರು.
8. ಮಾನ್ಯ ಅಲ್ಪಸಂಖ್ಯಾತರ ಹಜ್ ಮತ್ತು ವಕ್ಫ್ ಸಚಿವರ ಆಪ್ತ ಕಾರ್ಯದರ್ಶಿಗಳು,ಬೆಂಗಳೂರು
9. ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.
10. ಖಜಾನಾಧಿಕಾರಿಗಳು, ರಾಜ್ಯ ಹುಜೂರು ಖಜಾನೆ, ಬೆಂಗಳೂರು.
11. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು